**2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**

**ಸಿ.ಸಿ. 3362/2025**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ**04

**ದಿನಾಂಕಃ** 04.12.2025 **ಸಿಡಬ್ಲ್ಯೂ**10

| | |
|---|---|
| ಹೆಸರು | ನಾಗಪ್ಪ |
| ತಂದೆ ಹೆಸರು | ಗೋವಿಂದಪ್ಪ |
| ವಯಸ್ಸು | 62 ವರ್ಷ |
| ಉದ್ಯೋಗ | ವ್ಯವಸಾಯ |
| ವಾಸ ಸ್ಥಳ | ಕೊಕ್ಕನೂರು |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ಚಾಸಾ.11 ರವರ ಪರಿಚಯವಿದೆ. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿ ತನ್ನ ಸಹಿಯನ್ನು ಗುರುತಿಸಿದ್ದು ಅದು ಪಂಚರಿಗೆ ನೀಡಿದ ನೋಟಿಸ್ ಆಗಿದ್ದು ಅದನ್ನು ನಿಪಿ.8 ಎಂದು ಸಾಕ್ಷಿಯ ಸಹಿಯನ್ನು ನಿಪಿ.8 (ಎ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಇನ್ನೊಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿ ತನ್ನ ಸಹಿಯನ್ನು ಗುರುತಿಸಿದ್ದು ಅದು ವಾಹನ ಪಂಚನಾಮೆ ಆಗಿದ್ದು ಅದನ್ನು ಈಗಾಗಲೇ ನಿಪಿ.9 ಎಂದು ಸಾಕ್ಷಿಯ ಸಹಿಯನ್ನು ನಿಪಿ.9 (ಎ) ಎಂದು ಗುರುತಿಸಲಾಯಿತು. ಸದರಿ ಸಹಿಗಳನ್ನು ಈಗ್ಗೆ 4 ತಿಂಗಳ ಹಿಂದೆ ಮಲೆಬೆನ್ನೂರು ಠಾಣೆಯಲ್ಲಿ ಮಾಡಿರುತ್ತೇನೆ. ಯಾವ ಕಾರಣಕ್ಕಾಗಿ ಸಹಿ ಮಾಡಿದ್ದೇನೆ ಎಂದು ಗೊತ್ತಿಲ್ಲ. ಸಾಕ್ಷಿಗೆ 1 ಛಾಯ ಚಿತ್ರ ತೋರಿಸಲಾಗಿ ಅದರಲ್ಲಿ ತಾವು ಇರುವುದಾಗಿ ಒಪ್ಪಿದ್ದು ಅವುಗಳನ್ನು ನಿಪಿ. 10 ಮತ್ತು 11 ಎಂದು ಗುರುತಿಸಲಾಯಿತು. ಸದರಿ ಪೋಟೋವನ್ನು ಯಾವ ಕಾರಣಕ್ಕಾಗಿ ತೆಗೆದಿರುತ್ತಾರೆ ಎಂದು ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಮಾನ್ಯ ಎಪಿಪಿ ಯವರು ಕೋರಿದ್ದು, ಸಂಗತಿಗಳನ್ನು ಪರಿಶೀಲಿಸಲಾಗಿ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಅವರಿಗೆ ಪಾಟೀಸವಾಲು ಮಾಡಲು ಅನುಮತಿಸಲಾಯಿತು)

**ಪಾಟೀ ಸವಾಲುಃ ಸಸಅ ರವರಿಂದಃ**

ದಿಃ 19.03.2025 ರಂದು ಅಪಘಾತ ಪಡಿಸಿದ ವಾಹನ ಕೆಎ/17 ಹೆಚ್ ಎಂ 8248 ನೇ ಬೈಕನ್ನು ತಡೆ ಹಿಡಿದು ಪಂಚನಾಮೆಗೆ ಸಹಕರಿಸಿ ಎಂದು ನನಗೆ ಮತ್ತು ಚಾಸಾ.11 ರವರಿಗೆ ನೋಟಿಸ್ ಜಾರಿ ಮಾಡಿದ್ದರು ಎಂದರೆ ಸರಿ. ನಮ್ಮಗಳ ಹಾಗೂ ಚಾಸಾ12 ರವರ ಸಮಕ್ಷಮ ಸದರಿ ವಾಹನವನ್ನು ತಪಾಸಣೆ ಮಾಡಿ ಮದ್ಯಾಹ್ನ 2.15 ರಿಂದ 3.00 ಗಂಟೆವರೆಗೆ ಪಂಚನಾಮೆ ಮಾಡಿ ಪೋಟೋ

ತೆಗೆದಿರುತ್ತಾರೆ ಎಂದರೆ ಸರಿ. ಸದರಿ ಕಾಲಕ್ಕೆ ನಿಪಿ.10 ಮತ್ತು 11 ರಂತೆ ಛಾಯಾ ಚಿತ್ರ ತೆಗೆದಿರುತ್ತಾರೆ ಎಂದರೆ ಸರಿ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಪಿ ಬಿ ಸಿ ವಕೀಲರಿಂದಃ**

ಅಪಘಾತದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ ಎಂದರೆ ಸರಿ. ನಿಪಿ.9 ರ ಬಗ್ಗೆ ಪೊಲೀಸರು ನನಗೆ ಯಾವುದೇ ಮಾಹಿತಿ ನೀಡಿಲ್ಲ ಎಂದರೆ ಸರಿ. ನನ್ನ ಸಮಕ್ಷಮ ಪೊಲೀಸರು ಯಾವುದೇ ವಾಹನ ಜಪ್ತು ಪಡಿಸಿಕೊಂಡಿಲ್ಲ ಎಂದರೆ ಸರಿ.

**ಮರುವಿಚಾರಣೆ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

Sd/-

2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು

ಮತ್ತು ಜೆಎಂಎಫ್‌ಸಿ, ಹರಿಹರ